ಇ) ಹೌದು. ಶಿರಹಟ್ಟಿ ವಿಧಾನಸಭಾ ಕ್ಷೇತ್ರದಲ್ಲಿ ಬಾಡಿಗೆ, ದೇವಸ್ಥಾನ/ ಇತರೆ ಕಟ್ಟಡಗಳಲ್ಲಿ 67 ಅಂಗನವಾಡಿ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ. ಈ ಪೈಕಿ 3 ಕೇಂದ್ರಗಳಿಗೆ 2013–14ನೇ ಸಾಲಿನಲ್ಲಿ ಆರ್.ಐ.ಡಿ.ಎಫ್ ಮತ್ತು ಎಸ್.ಡಿ.ಪಿ. ಯೋಜನೆಯಡಿಯಲ್ಲಿ ಕಟ್ಟಡ ಮಂಜೂರಾಗಿದ್ದು, ನಿರ್ಮಾಣ ಹಂತದಲ್ಲಿರುತ್ತದೆ. ಉಳಿದ ಕೇಂದ್ರಗಳಿಗೆ ನಿವೇಶನ ಲಭ್ಯತೆ ಮತ್ತು ಅನುದಾನ ಲಭ್ಯತೆಗನುಗುಣವಾಗಿ ಹಂತ ಹಂತವಾಗಿ ಕಟ್ಟಡಗಳನ್ನು ನಿರ್ಮಿಸಲು ಕ್ರಮ ವಹಿಸಲಾಗುವುದು.

2014–15ನೇ ಸಾಲಿನಲ್ಲಿ ನಬಾರ್ಡ್‌ನ ಆರ್.ಐ.ಡಿ.ಎಫ್ ಯೋಜನೆ ಮತ್ತು ಎಮ್.ಜಿ.ಎನ್.ಆರ್.ಇ.ಜಿ.ಎ ಕಾರ್ಯಕ್ರಮದಡಿಯಲ್ಲಿ ಅನುದಾನವನ್ನು ಹೊಂದಾಣಿಕೆ ಮಾಡಿಕೊಂಡು 2 ಕಟ್ಟಡಗಳನ್ನು ಶಿರಹಟ್ಟಿ ವಿಧಾನಸಭಾ ಕ್ಷೇತ್ರದಲ್ಲಿ ನಿರ್ಮಿಸಲು ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.

ಈ) ಸ್ವಂತ ಕಟ್ಟಡಗಳಿಲ್ಲದಿರುವ ಅಂಗನವಾಡಿ ಕೇಂದ್ರಗಳಿಗೆ ಸರ್ಕಾರದ ವಿವಿಧ ಯೋಜನೆಗಳಾದ ಆರ್.ಐ.ಡಿ.ಎಫ್, ವಿಶೇಷ ಅಭಿವೃದ್ಧಿ ಯೋಜನೆ, ಮುಂತಾದ ಯೋಜನೆಗಳಡಿಯಲ್ಲಿ ನಿವೇಶನ ಮತ್ತು ಅನುದಾನ ಲಭ್ಯತೆಗನುಗುಣವಾಗಿ ಹಂತ ಹಂತವಾಗಿ ಕಟ್ಟಡಗಳನ್ನು ನಿರ್ಮಿಸಲಾಗುವುದು.

ನಿವೇಶನ ಮತ್ತು ಮನೆಗಳು

1373(1313); ಶ್ರೀ ದೊಡ್ಡಮನಿ ರಾಮಕೃಷ್ಣ ಸಿದ್ಧಲಿಂಗಪ್ಪ (ಶಿರಹಟ್ಟಿ)

ಅ) ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಗ್ರಾಮೀಣ ಪ್ರದೇಶದಲ್ಲಿ ನಿವೇಶನಗಳಿಗೆ ಅರ್ಜಿಗಳು ಬಂದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಅವರುಗಳಿಗೆ ನಿವೇಶನಗಳನ್ನು ಪೂರೈಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ) ಮನೆ ಇಲ್ಲದ ಜನರಿಗೆ ಮನೆಗಳನ್ನು ನಿರ್ಮಿಸಿ ಕೊಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಈ) ಯಾವ ಕಾಲಮಿತಿಯೊಳಗೆ ಮನೆ ಮತ್ತು ನಿವೇಶನಗಳನ್ನು ನೀಡಲಾಗುವುದು?

ಡಾ॥ ಎಂ.ಹೆಚ್. ಅಂಬರೀಷ್ (ವಸತಿ ಸಚಿವರು)

ಅ) ಬಂದಿದೆ.

ಆ) ನಿವೇಶನರಹಿತರಿಗೆ ನಿವೇಶನ ಹಂಚಿಕೆ ಮಾಡಲು ಗ್ರಾಮೀಣ ಪ್ರದೇಶದಲ್ಲಿ **ಗ್ರಾಮೀಣ ನಿವೇಶನ ಯೋಜನೆ ಮತ್ತು ವಾಜಪೇಯಿ ನಗರ ನಿವೇಶನ ಯೋಜನೆಗಳು** ಜಾರಿಯಲ್ಲಿರುತ್ತವೆ. ಈ ಯೋಜನೆಗಳಡಿ ನಿವೇಶನ ಹಂಚಿಕೆ ಮಾಡಲು ಸ್ಥಳೀಯವಾಗಿ ಲಭ್ಯವಿರುವ ವಸತಿಗೆ ಯೋಗ್ಯವಾದ ಸರ್ಕಾರಿ ಜಮೀನನ್ನು ಜಿಲ್ಲೆಯ ಜಿಲ್ಲಾಧಿಕಾರಿಗಳ ಅನುಮೋದನೆಯೊಂದಿಗೆ ನಿವೇಶನ ಹಂಚಿಕೆಗೆ ಬಳಸಿಕೊಳ್ಳಲಾಗುತ್ತಿದೆ.

ಸರ್ಕಾರಿ ಜಮೀನು ಲಭ್ಯವಿಲ್ಲದ ಸಂದರ್ಭಗಳಲ್ಲಿ ವಸತಿಗೆ ಸೂಕ್ತವಾದ ಖಾಸಗಿ ಜಮೀನನ್ನು ಭೂ ಮಾಲೀಕರ ಒಪ್ಪಂದದ ಮೇರೆಗೆ ಖರೀದಿಸಲು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಜಿಲ್ಲಾ ಸಮಿತಿಯನ್ನು ರಚಿಸಿದೆ. ಸದರಿ ಸಮಿತಿಯ ಮೂಲಕ ಜಮೀನು ಖರೀದಿ ಮಾಡಿ ನಿವೇಶನ ಹಂಚಿಕೆ ಮಾಡಲಾಗುತ್ತಿದೆ.

ಪ್ರಸಕ್ತ ಸಾಲಿನಲ್ಲಿ ಶಿರಹಟ್ಟಿ ತಾಲ್ಲೂಕಿನ ಗ್ರಾಮೀಣ ಪ್ರದೇಶದಲ್ಲಿ 47 ಕನಿಷ್ಟ ನಿವೇಶನಗಳು ಹಾಗೂ ನಗರ ಪ್ರದೇಶದಲ್ಲಿ 18 ಕನಿಷ್ಟ ನಿವೇಶನಗಳ ಹಂಚಿಕೆ ಮಾಡುವ ಗುರಿಯನ್ನು ಹೊಂದಲಾಗಿದೆ. ಜಿಲ್ಲಾಧಿಕಾರಿಗಳ ಮೂಲಕ ಜಮೀನು ಖರೀದಿಗೆ ಸೂಕ್ತ ಪ್ರಸ್ತಾವನೆಗಳು ಬಂದಲ್ಲಿ ಮುಂದಿನ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಇ) ಮನೆ ಇಲ್ಲದ ಬಡ ಜನರಿಗೆ ವಸತಿ ಸೌಕರ್ಯವನ್ನು ಒದಗಿಸಲು ಗ್ರಾಮೀಣ ಪ್ರದೇಶದಲ್ಲಿ ಬಸವ ವಸತಿ ಯೋಜನೆ ಮತ್ತು ಇಂದಿರಾ

ಅವಾಸ್ ಯೋಜನೆಗಳನ್ನು ಹಾಗೂ ನಗರ ಪ್ರದೇಶದಲ್ಲಿ ವಾಜಪೇಯಿ ನಗರ ವಸತಿ ಯೋಜನೆಗಳು ಜಾರಿಯಲ್ಲಿರುತ್ತವೆ.

ಈ) ವಸತಿ ಯೋಜನೆಗಳಡಿ ಸರ್ಕಾರವು ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸುವ ಅನುದಾನಕ್ಕೆ ಅನುಗುಣವಾಗಿ ಮನೆಗಳ ಗುರಿಯನ್ನು ಹಾಗೂ ನಿವೇಶನ ರಹಿತರಿಗೆ ನಿವೇಶನ ಹಂಚಿಕೆಯ ಗುರಿಯನ್ನು ನಿಗದಿಪಡಿಸಿ ಮಾರ್ಗಸೂಚಿಗಳನ್ವಯ ಕ್ರಮ ಕೈಗೊಳ್ಳಲಾಗುವುದು.

ಸರ್ಕಾರಿ ಮತ್ತು ಅನುದಾನಿತ ಶಾಲೆಗಳು

1377(1668); ಡಾ॥ ರಫೀಕ್ ಅಹ್ಮದ್ ಎಸ್ (ತುಮಕೂರು ನಗರ)

ಅ) ತುಮಕೂರು ನಗರ ವಿಧಾನಸಭಾ ಕ್ಷೇತ್ರದಲ್ಲಿ ಉರ್ದು ಶಾಲೆಗಳನ್ನು ಹೊರತುಪಡಿಸಿ ಎಷ್ಟು ಸರ್ಕಾರಿ ಮತ್ತು ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿವೆ (ಎಲ್ಲಾ ಶಾಲೆಗಳ ವಿವರಗಳನ್ನು ನೀಡಿವುದು)

ಆ) ಈ ಶಾಲೆಗಳಲ್ಲಿ ಕಳೆದ 3 ವರ್ಷಗಳಲ್ಲಿ ಆಗಿರುವ ದಾಖಲಾತಿಗಳ ವಿವರ ಸಲ್ಲಿಸುವುದು.

ಇ) ಈ ಶಾಲೆಗಳಲ್ಲಿರುವ ಕುಂದು ಕೊರತೆಗಳೇನು; ಈ ಕೊರತೆಗಳನ್ನು ನಿವಾರಿಸಲು ಸರ್ಕಾರ ಯಾವ ಕ್ರಮಕ್ಕೈಗೊಂಡಿದೆ?

ಶ್ರೀ ಕಿಮ್ಮನೆ ರತ್ನಾಕರ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ತುಮಕೂರು ನಗರ ವಿಧಾನಸಭಾ ಕ್ಷೇತ್ರದಲ್ಲಿರುವ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಸಂಖ್ಯೆ – 16, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ – 32, ಸರ್ಕಾರಿ ಪ್ರೌಢ ಶಾಲೆಗಳ ಸಂಖ್ಯೆ – 5, ಅನುದಾನಿತ ಕಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ – 1, ಅನುದಾನಿತ ಹಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ – 14, ಅನುದಾನಿತ ಪ್ರೌಢ ಶಾಲೆಗಳ ಸಂಖ್ಯೆ – 27.